"ಹೆಸರಾಯಿತು ಕರ್ನಾಟಕ, ಉಸಿರಾಗಲಿ ಕನ್ನಡ"

ಉಪನಿರ್ದೇಶಕರ ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ಜಿಲ್ಲಾ ಬಾಲಭವನ ಆವರಣ, ಎಂ.ಜಿ ರಸ್ತೆ, ತುಮಕೂರು –572101

Emai Id- dd.tumkurwcd@ymail.com & dd.tumkurwcd590@gmail.com

Phone No :0816–2956624

ಸಂ:ಉನಿತು:ಮಮಅ:ಐಸಿಡಿ:ಅಂಕಾಕ:ಆ.ನೇ:2025–26/1405

ದಿನಾಂಕ:10–12–2025

ಜಿಲ್ಲಾ ಸುಚನ ವಿಜ್ಞಾನ ಅಧಿಕಾರಿಗಳು,
ರಾಷ್ಟ್ರೀಯ ಜಿಲ್ಲಾ ಸುಚನ ವಿಜ್ಞಾನ ಕೇಂದ್ರ,
ತುಮಕೂರು–ರವರಿಗೆ

ಮಾನ್ಯರೇ,

**ವಿಷಯ:** ಜಿಲ್ಲೆಯಲ್ಲಿ ಖಾಲಿ ಇರುವ ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿಯರ ಆಯ್ಕೆಗಾಗಿ ಆನ್‌ಲೈನ್ (Online) ಮೂಲಕ ಅರ್ಜಿ ಆಹ್ವಾನಿಸಿರುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಆದೇಶ ಸಂಖ್ಯೆ:ಮಮಇ:154:ಐಸಿಡಿ::2020 ಬೆಂಗಳೂರು ದಿನಾಂಕ:03–12–2022

****

ವಿಷಯಕ್ಕೆ ಸಂಬಂಧಿಸಿದಂತೆ, ಜಿಲ್ಲೆಯಲ್ಲಿ ಖಾಲಿ ಇರುವ ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿಯರ ಹುದ್ದೆಗಳಿಗೆ ಗೌರವಧನ ಆಧಾರದ ಮೇಲೆ ಆಯ್ಕೆ ಮಾಡಲು ದಿನಾಂಕ:10–12–2025 ರಿಂದ ದಿನಾಂಕ:09–01–2026 ರವರೆಗೆ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಹ ಸ್ಥಳೀಯ ಮಹಿಳಾ ಅಭ್ಯರ್ಥಿಗಳು ಹಾಗೂ ಲಿಂಗತ್ವ ಅಲ್ಪಸಂಖ್ಯಾತ ಮಹಿಳೆಯರು ಆನ್‌ಲೈನ್ **ವೆಬ್‌ಸೈಟ್ ವಿಳಾಸ:**https://karnemakaone.kar.nic.in/abcd/ ಮೂಲಕ ಅರ್ಜಿಗಳನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.

ಸದರಿ ಮಾಹಿತಿಯನ್ನು ಹೆಚ್ಚಿನ ಪ್ರಚಾರಕ್ಕಾಗಿ ತುಮಕೂರು ವೆಬ್‌ಸೈಟ್‌ನಲ್ಲಿ ಪ್ರಕಟಿಸುವಂತೆ ಈ ಮೂಲಕ ತಮ್ಮಲ್ಲಿ ಕೋರಲಾಗಿದೆ.

ಲಗತ್ತು:– ಅಧಿಸೂಚನೆ

ತಮ್ಮ ವಿಶ್ವಾಸಿ

ಉಪನಿರ್ದೇಶಕರು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ತುಮಕೂರು

"ಹಸಿರಾಯಿತು ಕರ್ನಾಟಕ, ಉಸಿರಾಗಲಿ ಕನ್ನಡ"

ಉಪನಿರ್ದೇಶಕರ ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ಜಿಲ್ಲಾ ಬಾಲಭವನ ಆವರಣ, ಎಂ.ಜಿ ರಸ್ತೆ, ತುಮಕೂರು -572101

Emai Id- dd.tumkurwcd@ymail.com & dd.tumkurwcd590@gmail.com Phone No :0816-2956624

ಸಂಖ್ಯೆ:ಉನಿತು:ಮಮಅಇ:ಅಂ.ಕಾ.ಸ.:ಆನ್‌ಲೈನ್:ನೇ:2025-26 ದಿನಾಂಕ:09-12-2025

## :: ಅಧಿಸೂಚನೆ ::

ಸರ್ಕಾರದ ಆದೇಶ ಸಂಖ್ಯೆ:ಮಮಇ:154:ಐಸಿಡಿ::2020 ಬೆಂಗಳೂರು ದಿನಾಂಕ:03-12-2022 ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರ ನೇಮಕಾತಿಯ ಪರಿಷ್ಕೃತ ಮಾರ್ಗಸೂಚಿಯಂತೆ ಮಾನ್ಯ ಜಿಲ್ಲಾಧಿಕಾರಿಗಳು, ತುಮಕೂರು ಜಿಲ್ಲೆ ಇವರ ಅನುಮೋದನೆಯಂತೆ ತುಮಕೂರು ಜಿಲ್ಲೆಯ 11 ಶಿಶು ಅಭಿವೃದ್ಧಿ ಯೋಜನೆಗಳಲ್ಲಿ ಖಾಲಿ ಇರುವ ಅಂಗನವಾಡಿ ಕಾರ್ಯಕರ್ತೆಯರ ಹಾಗೂ ಅಂಗನವಾಡಿ ಸಹಾಯಕಿಯರ ಹುದ್ದೆಯ ಗೌರವಧನ ಸೇವೆಯ ಹುದ್ದೆಗಳನ್ನು ಭರ್ತಿ ಮಾಡಲು ಆನ್‌ಲೈನ್ **ವೆಬ್‌ಸೈಟ್ ವಿಳಾಸ:**https://karnemakaone.kar.nic.in/abcd/ ಮೂಲಕ ಈ ಕೆಳಗಿನ ಮಾರ್ಗಸೂಚಿ/ನಿಬಂಧನೆಗಳಲ್ಲಿ ತಿಳಿಸಿರುವಂತೆ ಅರ್ಹ ಮಹಿಳಾ ಅಭ್ಯರ್ಥಿಗಳು ಹಾಗೂ ಮಹಿಳಾ ಲಿಂಗತ್ವ ಅಲ್ಪ ಸಂಖ್ಯಾತ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಗಳನ್ನು ದಿನಾಂಕ:10-12-2025 ರಿಂದ ದಿನಾಂಕ:09-01-2026 ರ ಸಂಜೆ 5.30 ರವರೆಗೆ ಸಲ್ಲಿಸಬಹುದಾಗಿದೆ. ತಾಲ್ಲೂಕುವಾರು ಪ್ರಕಟಣೆ ಹೊರಡಿಸುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಈ ಕೆಳಕಂಡಂತಿರುತ್ತದೆ.

| ಕ್ರ.ಸಂ | ಯೋಜನೆಯ ಹೆಸರು | ಮುಖ್ಯ ಅಂಗನವಾಡಿ ಕಾರ್ಯಕರ್ತೆ | ಅಂಗನವಾಡಿ ಸಹಾಯಕಿ | ಒಟ್ಟು |
|---|---|---|---|---|
| 1 | ಚಿಕ್ಕನಾಯಕನಹಳ್ಳಿ | 10 | 61 | **71** |
| 2 | ಗುಬ್ಬಿ | 10 | 118 | **128** |
| 3 | ಕೊರಟಗೆರೆ | 12 | 89 | **101** |
| 4 | ಕುಣಿಗಲ್ | 08 | 68 | **76** |
| 5 | ಮಧುಗಿರಿ | 12 | 79 | **91** |
| 6 | ಪಾವಗಡ | 07 | 51 | **58** |
| 7 | ಶಿರಾ | 26 | 103 | **129** |
| 8 | ತಿಪಟೂರು | 10 | 54 | **64** |
| 9 | ತುಮಕೂರು ಗ್ರಾಮಾಂತರ | 12 | 109 | **121** |
| 10 | ತುಮಕೂರು ನಗರ | 05 | 22 | **27** |
| 11 | ತುರುವೇಕೆರೆ | 05 | 75 | **80** |
| | **ಒಟ್ಟು** | **117** | **829** | **946** |

**ಸೂಚನೆಗಳು:-**

1. ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿ ಹುದ್ದೆಗಳಿಗೆ ಆನ್‌ಲೈನ್(Online)ನಲ್ಲಿ ಸಲ್ಲಿಸಿದ ಅರ್ಜಿಗಳನ್ನು ಮಾತ್ರ ಪರಿಗಣಿಸಲಾಗುವುದು.
2. ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಮೊದಲು ನೇಮಕಾತಿಯ ಮಾರ್ಗಸೂಚಿ/ನಿಬಂಧನೆಗಳನ್ನು ಸ್ಪಷ್ಟವಾಗಿ ಓದಿಕೊಂಡು ನೀಡಲಾಗಿರುವ ಸೂಚನೆಯಂತೆ ಅರ್ಜಿಗಳನ್ನು ಭರ್ತಿ ಮಾಡಿ ಅವಶ್ಯಕ ದೃಢೀಕೃತ ದಾಖಲೆಗಳನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಿ ಅರ್ಜಿ ಸಲ್ಲಿಸುವುದು ಹಾಗೂ ಡಿಜಿ ಲಾಕರ್ (Dig locker )ಬಳಸಿ ಕೂಡ ಅರ್ಜಿ ಸಲ್ಲಿಸಬಹುದಾಗಿದೆ.
3. ಆನ್‌ಲೈನ್(Online) ಮೂಲಕವೇ ಎಲ್ಲಾ ಅಗತ್ಯ ದಾಖಲಾತಿಗಳನ್ನು ಸಲ್ಲಿಸುವುದು. ತದನಂತರ ಸಲ್ಲಿಸುವ ದಾಖಲಾತಿಗಳನ್ನು ಪರಿಗಣಿಸಲಾಗುವುದಿಲ್ಲ.

ಪುಟ2ಕ್ಕೆ

1. ಅರ್ಜಿ ಸಲ್ಲಿಸುವ ಅಭ್ಯರ್ಥಿಗಳಿಗೆ ಕೊನೆಯ ದಿನಾಂಕ:09-01-2026ಕ್ಕೆ 19 ವರ್ಷ ಪೂರ್ಣಗೊಂಡಿರಬೇಕು ಹಾಗೂ 35 ವರ್ಷ ಮೀರಿರಬಾರದು ಹಾಗೂ ವಿಕಲಚೇತನರಿಗೆ 10 ವರ್ಷಗಳ ವಯೋಮಿತಿ ಸಡಿಲಿಕೆ ಇರುತ್ತದೆ.
2. ಅಭ್ಯರ್ಥಿಯು ಅಂಗನವಾಡಿ ಕಾರ್ಯಕರ್ತೆ ಹುದ್ದೆಗೆ ಕನಿಷ್ಠ ವಿದ್ಯಾರ್ಹತೆ ಪಿ.ಯು.ಸಿ. ತೇರ್ಗಡೆ ಹೊಂದಿರಬೇಕು.
3. ಅಭ್ಯರ್ಥಿಯು ಅಂಗನವಾಡಿ ಕಾರ್ಯಕರ್ತೆ ಹುದ್ದೆಗೆ ಎಸ್.ಎಸ್.ಎಲ್.ಸಿ ಯಲ್ಲಿ ಕನ್ನಡ ಭಾಷೆಯನ್ನು ಪ್ರಥಮ ಅಥವಾ ದ್ವಿತೀಯ ಭಾಷೆಯನ್ನಾಗಿ ಓದಿರಬೇಕು.
4. ಅಂಗನವಾಡಿ ಕಾರ್ಯಕರ್ತೆಯರ ನೇಮಕಾತಿ ಸಂದರ್ಭದಲ್ಲಿ "ಸರ್ಕಾರದ ಅಂಗೀಕೃತ ಸಂಸ್ಥೆಗಳಿಂದ D.S.E.R.T ಯಿಂದ ECCE N.T.T ಡಿಪ್ಲೊಮಾ ಕೋರ್ಸ್, JOC, ಕೋರ್ಸ್, N.T.T ಕೋರ್ಸ್‌ಗಳನ್ನು ಹಾಗೂ ಅಂಗನವಾಡಿ ಚಟುವಟಿಕೆಗಳಿಗೆ ಸಂಬಂಧಿಸಿದಂತೆ ಡಿಪ್ಲೊಮಾ ನ್ಯೂಟ್ರಿಷಿಯನ್, ಹೋಂ ಸೈನ್ಸ್ ಸರ್ಟಿಫಿಕೇಟ್ ಕೋರ್ಸ್, ಒಂದು ವರ್ಷದ ನರ್ಸರಿ ಅಥವಾ ಪೂರ್ವ ಪ್ರಾಥಮಿಕ ತರಬೇತಿ ಪಡೆದು ಪ್ರಮಾಣ ಪತ್ರ ಹೊಂದಿದವರಿಗೆ ಮೊದಲ ಆದ್ಯತೆ ನೀಡಲಾಗುವುದು ಹಾಗೂ ಸದರಿಯವರಿಗೆ ಬೋನಸ್ +5 ಅಂಕಗಳನ್ನು ನೀಡಲಾಗುವುದು.
5. ಅಭ್ಯರ್ಥಿಯು ಅಂಗನವಾಡಿ ಸಹಾಯಕಿ ಹುದ್ದೆಗೆ ಕನಿಷ್ಠ ವಿದ್ಯಾರ್ಹತೆ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ತರಗತಿಯಲ್ಲಿ ಉತ್ತೀರ್ಣವಾಗಿರಬೇಕು.

   (ಅ) ಕರ್ನಾಟಕ ರಾಜ್ಯ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಮುಕ್ತ ಶಾಲೆ/ಮುಕ್ತ ವಿದ್ಯಾಲಯಗಳಲ್ಲಿ ಎಸ್.ಎಸ್.ಎಲ್.ಸಿ ತೇರ್ಗಡೆ ಹೊಂದಿದ ಅಭ್ಯರ್ಥಿಗಳು ಪ್ರಥಮ/ದ್ವಿತೀಯ ಭಾಷೆಯಾಗಿ ಕನ್ನಡ ಹಾಗೂ ಸಾಮಾನ್ಯ ಗಣಿತ ಮತ್ತು ಸಮಾಜ ಶಾಸ್ತ್ರ/ಸಮಾಜ ವಿಜ್ಞಾನ ವಿಷಯಗಳನ್ನು ಕಡ್ಡಾಯವಾಗಿ ವ್ಯಾಸಂಗ ಮಾಡಿದ್ದು, ಪ್ರಮಾಣ ಪತ್ರ/ಅಂಕಪಟ್ಟಿಯು ಗರಿಷ್ಠ 625 ಕನಿಷ್ಟ 219 ಅಂಕಗಳನ್ನು ಹೊಂದಿದ್ದಲ್ಲಿ ಅಂತಹ ಅಭ್ಯರ್ಥಿಗಳನ್ನು ಪರಿಗಣಿಸಲಾಗುವುದು.

   (ಆ) ಬೇರೆ ರಾಜ್ಯಗಳಲ್ಲಿ ವ್ಯಾಸಂಗ ಮಾಡಿದ್ದು, ಕನ್ನಡವನ್ನು ಪ್ರಥಮ/ದ್ವಿತೀಯ ಭಾಷೆಯಾಗಿ ಅಭ್ಯಾಸ ಮಾಡಿದ್ದರೂ ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಆ ರಾಜ್ಯದಲ್ಲಿ ನಿಗಧಿಪಡಿಸಿದ ಗರಿಷ್ಠ ಹಾಗೂ ಕನಿಷ್ಠ ಅಂಕಗಳು ಹಾಗೂ ಕರ್ನಾಟಕ ರಾಜ್ಯದಲ್ಲಿ ನಿಗಧಿಪಡಿಸಿದ ಗರಿಷ್ಠ ಹಾಗೂ ಕನಿಷ್ಠ ಅಂಕದಲ್ಲಿ ವ್ಯತ್ಯಾಸವಿದ್ದಲ್ಲಿ ಕರ್ನಾಟಕದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಗಳನ್ನು ಮಾತ್ರ ಪರಿಗಣಿಸಲಾಗುವುದು.

   (ಇ) ಅಂಗನವಾಡಿ ಸಹಾಯಕಿಯರು ಯಾವುದೇ ಭಾಷಾ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ್ದರೂ ಹಾಗೂ ಯಾವುದೇ ರಾಜ್ಯದಲ್ಲಿ ವ್ಯಾಸಂಗ ಮಾಡಿದ್ದರೂ ಸಹಾ ಅವರು ಕನ್ನಡ ಭಾಷೆಯನ್ನು ಪ್ರಥಮ/ದ್ವಿತೀಯ ಭಾಷೆಯಾಗಿ ವ್ಯಾಸಂಗ ಮಾಡಿರಬೇಕು ಹಾಗೂ ಮಾತೃಭಾಷೆ ಕನ್ನಡವಲ್ಲದೇ ಇರುವ ಅಭ್ಯರ್ಥಿಗಳಿಗೆ ಆಯ್ಕೆ ಸಮಿತಿಯು ಆಯ್ಕೆ ಸಮಯದಲ್ಲಿ ಸಂದರ್ಶನ ಏರ್ಪಡಿಸಿ ಹಾಗೂ ಅವಶ್ಯವಿದ್ದಲ್ಲಿ ಕನ್ನಡ ಭಾಷೆಯ ಜ್ಞಾನದ ಕುರಿತಂತೆ ಓದಿಸಿ, ಬರೆಸಿ ಅವರ ಕನ್ನಡ ಭಾಷಾ ಜ್ಞಾನವನ್ನು ಪರೀಕ್ಷಿಸಿ ಅವರನ್ನು ಆಯ್ಕೆ ಮಾಡುವ ಬಗ್ಗೆ ಸಮಿತಿಯವರು ನಿರ್ಧರಿಸಲಾಗುವುದು.
6. ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಮುನ್ನ ಇಲಾಖಾ ವೆಬ್‌ಸೈಟ್‌ನಲ್ಲಿ ನಮೂದಿಸಿರುವ ಸರ್ಕಾರದ ಆದೇಶ ದಿನಾಂಕ:03-12-2022 ಮತ್ತು ದಿನಾಂಕ: 18-11-2024 ರಲ್ಲಿ ತಿಳಿಸಿರುವ ಮಾರ್ಗಸೂಚಿಯ ಮಾನದಂಡದ ಪ್ರಕಾರ ನೇಮಕಾತಿ ಮಾಡಲಾಗುವುದು.

ಉಪನಿರ್ದೇಶಕರು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ತುಮಕೂರು

## ಆನ್‌ಲೈನ್ ಅರ್ಜಿಯೊಂದಿಗೆ ಲಗತ್ತಿಸಬೇಕಾದ ದಾಖಲಾತಿಗಳು:

1. ಅರ್ಜಿ ನಿಗದಿತ ನಮೂನೆಯಲ್ಲಿ (ಆನ್‌ಲೈನ್)
2. ಧೃಢೀಕೃತ ಜನನ ಪ್ರಮಾಣ ಪತ್ರ/ಜನ್ಮದಿನಾಂಕ ಇರುವ ಎಸ್.ಎಸ್.ಎಲ್.ಸಿ. ಅಂಕಪಟ್ಟಿ/ಜನ್ಮ ದಿನಾಂಕ ಇರುವ ಶಾಲಾ ಪ್ರಮಾಣ ಪತ್ರ.
3. ನಿಗದಿತ ವಿದ್ಯಾರ್ಹತೆಯ ಧೃಢೀಕೃತ ಅಂಕಪಟ್ಟಿ.
4. ಅಭ್ಯರ್ಥಿಯು ಅದೇ ಗ್ರಾಮದಲ್ಲಿ (ನಗರ ಪ್ರದೇಶವಾಗಿದ್ದಲ್ಲಿ ಅದೇ ವಾರ್ಡ್‌ನಲ್ಲಿ) ವಾಸ್ತವ್ಯವಿರುವ ಬಗ್ಗೆ <u>ತಹಶೀಲ್ದಾರರು/ಉಪ ತಹಶೀಲ್ದಾರರಿಂದ</u> ಪಡೆದ ಮೂರು (03) ವರ್ಷದೊಳಗಿನ ವಾಸಸ್ಥಳ ದೃಢೀಕರಣ ಪತ್ರ.
5. ಸ್ಥಳೀಯರು ಎಂಬುದನ್ನು ದೃಢೀಕರಿಸಲು ಪೂರಕ ದಾಖಲೆಗಳಾಗಿ ಆಧಾರ ಕಾರ್ಡ್, ರೇಷನ್‌ಕಾರ್ಡ್, ಮತದಾರರ ಗುರುತಿನ ಚೀಟಿಗಳನ್ನು ಪಡೆಯುವುದು. ಮಜಿರೆ ತಾಂಡಾ ಹಾಗೂ ಹಾಡಿಗೆ ಸೇರಿದವರಾಗಿದ್ದರೆ ಸಂಬಂಧಿಸಿದ ವಾಸ್ತವ್ಯ ಪ್ರಮಾಣ ಪತ್ರ ಪಡೆದು ಸಲ್ಲಿಸುವುದು
6. ಅಭ್ಯರ್ಥಿಗಳ ಜಾತಿ ಪ್ರಮಾಣ ಪತ್ರ.(ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಮಾತ್ರ)
7. ಅಂಗನವಾಡಿ ಕಾರ್ಯಕರ್ತೆ ಹುದ್ದೆಗೆ ಅರ್ಜಿ ಸಲ್ಲಿಸುವವರು ಅಂಗವಿಕಲರಾಗಿದ್ದಲ್ಲಿ ದೈಹಿಕ ಅಂಗವಿಕಲತೆ ಶೇ.40% ಮೀರದಂತೆ ಇರುವವರು ಅರ್ಜಿ ಸಲ್ಲಿಸಬಹುದು. ಅಂಗವಿಕಲತೆ ಪ್ರಮಾಣ ಪತ್ರ ಲಗತ್ತಿಸುವುದು. ನೇಮಕಾತಿ ಪ್ರಕ್ರಿಯೆಯಲ್ಲಿ ನಿಗಧಿಪಡಿಸಿದ ವಿದ್ಯಾರ್ಹತೆಯಲ್ಲಿ ಗಳಿಸಿದ ಅಂಕಗಳಿಗೆ ಅಂಗವಿಕಲರಿಗೆ+5 ಬೋನಸ್ ಅಂಕಗಳನ್ನು ನೀಡಲಾಗುತ್ತದೆ ಅಂಗವಿಕಲ ಅಭ್ಯರ್ಥಿಗಳು ಅಂಗನವಾಡಿ ಕಾರ್ಯಕರ್ತೆ ಹುದ್ದೆಗೆ ಅರ್ಜಿ ಸಲ್ಲಿಸಲು ಕನಿಷ್ಟ 19 ವರ್ಷದಿಂದ ಗರಿಷ್ಟ 45 ವರ್ಷದ ವಯೋಮಿತಿಯೊಳಗೆ ಇರತಕ್ಕದ್ದು.
8. ಅಭ್ಯರ್ಥಿಯು ವಿಚ್ಛೇದಿತರಾಗಿದ್ದಲ್ಲಿ, ವಿಚ್ಛೇದನಾ ಪ್ರಮಾಣ ಪತ್ರ ಲಗತ್ತಿಸುವುದು. (ನ್ಯಾಯಾಲಯದಿಂದ ಪಡೆದಿರಬೇಕು) ನೇಮಕಾತಿ ಪ್ರಕ್ರಿಯೆಯಲ್ಲಿ ನಿಗದಿಪಡಿಸಿದ ವಿದ್ಯಾರ್ಹತೆಯಲ್ಲಿ ಗಳಿಸಿದ ಅಂಕಗಳಿಗೆ ವಿಚ್ಛೇದಿತೆಯರಿಗೆ +5 ಬೋನಸ್ ಅಂಕಗಳನ್ನು ನೀಡಲಾಗುತ್ತದೆ.
9. ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವತಿಯಿಂದ ನಡೆಸಲ್ಪಟ್ಟ ಮಾಜಿ ದೇವದಾಸಿಯರ ಸಮೀಕ್ಷೆಯ ಪಟ್ಟಿಯಲ್ಲಿರುವ ಮಾಜಿ ದೇವದಾಸಿಯರ ಮಕ್ಕಳು ಅರ್ಜಿ ಸಲ್ಲಿಸಿದಲ್ಲಿ ಈ ಬಗ್ಗೆ ಮಹಿಳಾ ಅಭಿವೃದ್ಧಿ ನಿಗಮದ ಅಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ ಸಲ್ಲಿಸುವುದು ನೇಮಕಾತಿ ಪ್ರಕ್ರಿಯೆಯಲ್ಲಿ ನಿಗದಿಪಡಿಸಿದ ವಿದ್ಯಾರ್ಹತೆಯಲ್ಲಿ ಗಳಿಸಿದ ಅಂಕಗಳಿಗೆ ಮಾಜಿ ದೇವದಾಸಿಯರ ಮಕ್ಕಳಿಗೆ +5 ಬೋನಸ್ ಅಂಕಗಳನ್ನು ನೀಡಲಾಗುತ್ತದೆ
10. ಅಭ್ಯರ್ಥಿಯು ಇಲಾಖೆಯ ಸುಧಾರಣಾ ಸಂಸ್ಥೆ/ ರಾಜ್ಯ ಮಹಿಳಾ ನಿಲಯಗಳ ನಿವಾಸಿಯಾಗಿದ್ದಲ್ಲಿ ಕನಿಷ್ಠ 3 ವರ್ಷ ಸಂಸ್ಥೆಯಲ್ಲಿರಬೇಕು ಹಾಗೂ ಈ ಬಗ್ಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳಿಂದ ಪಡೆದ ನಿವಾಸಿ ಪ್ರಮಾಣ ಪತ್ರ ಲಗತ್ತಿಸುವುದು. ವಾಸಸ್ಥಳ ದೃಢೀಕರಣವನ್ನು ಸಲ್ಲಿಸಿರುವ ಆ ಜಿಲ್ಲೆಯಲ್ಲಿ ಎಲ್ಲಿಯಾದರೂ ಅರ್ಜಿ ಸಲ್ಲಿಸಬಹುದು.
11. ಅಭ್ಯರ್ಥಿಯು ಯೋಜನಾ ನಿರಾಶ್ರಿತರಾಗಿದ್ದಲ್ಲಿ ತಹಶೀಲ್ದಾರರಿಂದ ಪಡೆದ ಪ್ರಮಾಣ ಪತ್ರ ಸಲ್ಲಿಸುವುದು. ನೇಮಕಾತಿ ಪ್ರಕ್ರಿಯೆಯಲ್ಲಿ ನಿಗದಿಪಡಿಸಿದ ವಿದ್ಯಾರ್ಹತೆಯಲ್ಲಿ ಗಳಿಸಿದ ಅಂಕಗಳಿಗೆ ಯೋಜನಾ ನಿರಾಶ್ರಿತರಿಗೆ +5 ಬೋನಸ್ ಅಂಕಗಳನ್ನು ನೀಡಲಾಗುತ್ತದೆ.
12. ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಾಗ ತಂತ್ರಾಂಶದಲ್ಲಿ ಅಳವಡಿಸಿರುವ ಅರ್ಜಿ ಸಲ್ಲಿಕೆಯ ಮಾರ್ಗಸೂಚಿಗಳನ್ನು ಡೌನ್‌ಲೋಡ್ ಮಾಡಿಕೊಂಡು ಓದಿ ಅರ್ಥೈಸಿಕೊಂಡು ಅರ್ಜಿ ಸಲ್ಲಿಸುವುದು.
13. ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಹುದ್ದೆಗಳಿಗೆ ವಿಧವೆಯರು ಅರ್ಜಿ ಸಲ್ಲಿಸಿದಾಗ ಆಸಿಡ್ ದಾಳಿಗೆ ಒಳಗಾದವರು ಮತ್ತು ಇಲಾಖಾ ಸಂಸ್ಥೆಗಳ ನಿವಾಸಿಗಳನ್ನು ಹೊರತುಪಡಿಸಿ ಇತರ ಎಲ್ಲಾ ಸ್ವೀಕೃತ ಅರ್ಜಿಗಳನ್ನು ಪರಿಗಣಿಸದೇ ಮೂರನೇ ಆದ್ಯತೆ ಮೇರೆಗೆ ನೇರವಾಗಿ ವಿಧವೆಯರನ್ನೇ ಆಯ್ಕೆಗೆ ಪರಿಗಣಿಸಲಾಗುವುದು. ವಿಧವೆಯರು ಪತಿಯ ಮರಣ ಪ್ರಮಾಣ ಪತ್ರ ಅಥವಾ ವಿಧವಾ ಪ್ರಮಾಣ ಪತ್ರಗಳನ್ನು ಕಡ್ಡಾಯವಾಗಿ ಲಗತ್ತಿಸುವುದು. ಅರ್ಜಿ ಸಲ್ಲಿಸಿದ ನಂತರ ವಿಧವೆಯಾದಲ್ಲಿ ಪರಿಗಣಿಸಲಾಗುವುದಿಲ್ಲ.
14. ವಿಧವೆಯರಲ್ಲಿ ಆತ್ಮಹತ್ಯೆ ಮಾಡಿಕೊಂಡ ರೈತರ ಪತ್ನಿಗೆ (ವಿಧವೆಗೆ) ಪ್ರಥಮ ಆದ್ಯತೆ ನೀಡತಕ್ಕದ್ದು. ಈ ಬಗ್ಗೆ ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ ಸಲ್ಲಿಸುವುದು.
15. ವಿಧವೆಯರು ತಾವು ಪ್ರಸ್ತುತ ಎಲ್ಲಿ ವಾಸವಿರುವುದಾಗಿ, ವಾಸಸ್ಥಳ ದೃಢೀಕರಣವನ್ನು ಸಲ್ಲಿಸಿರುತ್ತಾರೆ, ಆ ಸ್ಥಳವನ್ನೇ ಅವರ ವಾಸಸ್ಥಳವೆಂದು ಪರಿಗಣಿಸಲಾಗುವುದು.
16. ಒಂದೇ ಹುದ್ದೆಗೆ ಇಬ್ಬರು ವಿಧವೆಯರು ಅರ್ಜಿ ಸಲ್ಲಿಸಿದಲ್ಲಿ ಗರಿಷ್ಠ ಅಂಕ ಪಡೆದವರಿಗೆ ಪ್ರಥಮ ಆದ್ಯತೆ ನೀಡಲಾಗುವುದು.

ಉಪನಿರ್ದೇಶಕರು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ತುಮಕೂರು